## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯ್ದೆ 2007 ರಡಿ ರಚಿಸಲಾಗಿರುವ ರಾಜ್ಯ ಪರಿಷತ್‌ಗೆ ಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಹಿರಿಯ ನಾಗರಿಕರನ್ನು ನಾಮನಿರ್ದೇಶಿಸುವ ಬಗ್ಗೆ

**ಓದಲಾಗಿದೆ:** 1] ಸರ್ಕಾರದ ಆದೇಶ ಸಂಖ್ಯೆ:ಮಮಇ/479/ಪಿಹೆಚ್‌ಪಿ/2007, ದಿನಾಂಕ:22-08-2011.

2] ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ನಿಅಕಾಇ/ ಸಿ4/ ಹಿ.ನಾ.ನೀತಿ/ ಅನುಷ್ಠಾನ/ 2011-12 /2012-13/644/4988 ದಿನಾಂಕ: 28-05-2012 ಮತ್ತು 05-03-2013.

**ಪ್ರಸ್ತಾವನೆ:**

ಮೇಲೆ ಓದಲಾದ [1]ರ ಸರ್ಕಾರದ ಆದೇಶದಲ್ಲಿ ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯ್ದೆ 2007ನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ರಾಜ್ಯ ಪರಿಷತ್(State Council)ನ್ನು ಈ ಕೆಳಗಿನಂತೆ ರಚಿಸಿ ಆದೇಶ ಹೊರಡಿಸಲಾಗಿದೆ.

| ಕ್ರ ಸಂ. | ಪದನಾಮ ಮತ್ತು ಇಲಾಖೆಯ ಹೆಸರು | ಪದನಾಮ |
|---|---|---|
| 1. | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು | ಅಧ್ಯಕ್ಷರು |
| 2. | ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ | ಸದಸ್ಯರು |
| 3. | ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ | ಸದಸ್ಯರು |
| 4. | ಸರ್ಕಾರದ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | ಸದಸ್ಯರು |
| 5. | ಸರ್ಕಾರದ ಕಾರ್ಯದರ್ಶಿ, ಕಂದಾಯ ಇಲಾಖೆ(ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ನಿರ್ದೇಶನಾಲಯ) | ಸದಸ್ಯರು |
| 6. | ಸರ್ಕಾರದ ಕಾರ್ಯದರ್ಶಿ, ಸಾರಿಗೆ ಇಲಾಖೆ | ಸದಸ್ಯರು |
| 7. | ಸರ್ಕಾರದ ಕಾರ್ಯದರ್ಶಿ, ಗೃಹ ಇಲಾಖೆ | ಸದಸ್ಯರು |
| 8. | ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ | ಸದಸ್ಯ ಕಾರ್ಯದರ್ಶಿ |
| 9. | ರಾಜ್ಯ ಸರ್ಕಾರದಿಂದ ನಾಮ ನಿರ್ದೇಶಿಸಲ್ಪಡುವ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರೇತರ ಸ್ವಯಂ ಸೇವಾ ಸಂಸ್ಥೆಗಳ 4 ಜನ ಪ್ರತಿನಿಧಿಗಳು ಹಾಗೂ 4 ಜನ ಹಿರಿಯ ನಾಗರಿಕರು | ಸರ್ಕಾರೇತರ ಸದಸ್ಯರು |

ಮೇಲೆ ಓದಲಾದ (2)ರ ಪತ್ರಗಳಲ್ಲಿ, ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು, ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯ್ದೆ 2007ರಡಿ ರಾಜ್ಯ ಪರಿಷತ್ (State Council)ನ ಸರ್ಕಾರೇತರ ಸದಸ್ಯರನ್ನಾಗಿ ನಾಮನಿರ್ದೇಶಿಸಲು ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ 07 ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಅರ್ಹ 25 ಹಿರಿಯ ನಾಗರಿಕರ ಸೇವಾ ವಿವರಗಳನ್ನು ನೀಡುತ್ತಾ, ರಾಜ್ಯ ಪರಿಷತ್‌ಗೆ ನಾಮ ನಿರ್ದೇಶಿಸಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದೆ, ಸರ್ಕಾರಿ ಆದೇಶ ಸಂಖ್ಯೆ: ಮಮಇ / 479/ ಪಿಹೆಚ್‌ಪಿ/ 2007, ದಿನಾಂಕ: 22.08.2011 ರ ಆದೇಶದಲ್ಲಿ ರಾಜ್ಯ ಸರ್ಕಾರದಿಂದ

...2

ನಾಮ ನಿರ್ದೇಶಿಸಲ್ಪಡುವ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರೇತರ ಸ್ವಯಂ ಸೇವಾ ಸಂಸ್ಥೆಗಳ 4 ಜನ ಪ್ರತಿನಿಧಿಗಳು ಹಾಗೂ 4 ಜನ ಹಿರಿಯ ನಾಗರಿಕರನ್ನು ಸರ್ಕಾರೇತರ ಸದಸ್ಯರಾಗಿ ನೇಮಿಸಲು ಅವಕಾಶವಿರುವುದರಿಂದ, ದಿನಾಂಕ: 22.08.2011ರಂದು ರಚಿಸಲಾಗಿರುವ ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯ್ದೆ 2007ನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ರಾಜ್ಯ ಪರಿಷತ್ (State Council)ಗೆ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಸರ್ಕಾರೇತರ ಸ್ವಯಂ ಸೇವಾ ಸಂಸ್ಥೆಗಳ 4 ಜನ ಪ್ರತಿನಿಧಿಗಳು ಹಾಗೂ 4 ಜನ ಹಿರಿಯ ನಾಗರಿಕರನ್ನು ಸರ್ಕಾರೇತರ ಸದಸ್ಯರನ್ನಾಗಿ ನೇಮಿಸಲು, ಆಯ್ಕೆಗೊಳಿಸಲು ನಿರ್ಧರಿಸಲಾಗಿದೆ. ಅದರಂತೆ ದಿನಾಂಕ: 22-08-2011ರ ಸರ್ಕಾರಿ ಆದೇಶವನ್ನು ಭಾಗಶಃ ಮಾರ್ಪಡಿಸಿ ಈ ಕೆಳಗಿನಂತೆ ಆದೇಶ ಹೊರಡಿಸಲಾಗಿದೆ.

| ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರೇತರ ಸ್ವಯಂ ಸೇವಾ ಸಂಸ್ಥೆಗಳು |
|---|
| 1. ಜೆ.ಎಸ್.ಎಸ್ ಮಹಾ ವಿದ್ಯಾಪೀಠ, ಜಗದ್ಗುರು ಶ್ರೀ ಶಿವರಾತ್ರಿ ರಾಜೇಂದ್ರ ವೃತ್ತ, ಲಕ್ಷ್ಮೀಪುರಂ, ಮೈಸೂರು |
| 2. ಸಂಧ್ಯಾದೀಪ, ನಂ.50, 39 ನೇ ಅಡ್ಡರಸ್ತೆ, ಪೂರ್ಣಪ್ರಜ್ಞಾ ಬಡಾವಣೆ, ಬೆಂಗಳೂರು-61 |
| 3. ನೈಟಿಂಗೇಲ್ ಮೆಡಿಕಲ್ ಟ್ರಸ್ಟ್, ನಂ.337, 2ನೇ ಕ್ರಾಸ್, 1ನೇ ಬ್ಲಾಕ್, ಆರ್.ಟಿ.ನಗರ, ಬೆಂಗಳೂರು. |
| 4. ಹಿರಿಯ ನಾಗರಿಕರ ವೇದಿಕೆ, ಕೊಡಗು(ರಿ), ನಗರ ಪೌರ ಸಭೆಯ ಕಾಂಪ್ಲೆಕ್ಸ್ ಎದುರು, ಖಾಸಗಿ ಬಸ್ ನಿಲ್ದಾಣದ ಹತ್ತಿರ, ಮಡಿಕೇರಿ. |
| ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರೇತರ ಪ್ರತಿನಿಧಿಗಳು |
| 1. ಶ್ರೀ ಲಕ್ಷ್ಮೀನಾರಾಯಣ, ನಿಸರ್ಗ ನಂದನಾ ಲೇಔಟ್, ಬನ್ನೇರುಘಟ್ಟ, ಆನೇಕಲ್ ರಸ್ತೆ, ಕೊಪ್ಪ ಗೇಟ್, ಬೆಂಗಳೂರು-83 |
| 2. ಡಾ. ನಾಗರತ್ನ ಜೋಶಿ, ಕೃಷ್ಣಾ ಸನ್ನಿದಿ, ಸಂಗನಕಲ್ಲು, ಮೋಕಾ ರಸ್ತೆ, ಬಳ್ಳಾರಿ |
| 3. ಶ್ರೀಮತಿ ಗುರಮ್ಮ ಸಿದ್ಧರೆಡ್ಡಿ, ಕಿತ್ತೂರು ರಾಣಿ ಚೆನ್ನಮ್ಮ ಮಹಿಳಾ ಮಂಡಳಿ, ಗುಲ್ಬರ್ಗ ಶಾಖೆ, ಸಾಗರ ಬಿಲ್ಡಿಂಗ್, ಚಿಲ್ಡ್ರನ್ ಪಾರ್ಕ್ ಹತ್ತಿರ, ಶಾಂತಿನಗರ ಗುಲ್ಬರ್ಗ. |
| 4. ಶ್ರೀ. ಎಂ.ಎಸ್. ಚೌಗಲ, ನಾಗನೂರು ಶಿವಬಸವೇಶ್ವರ ಟ್ರಸ್ಟ್, ಶ್ರೀಮತಿ ಚಿನ್ನಮ್ಮ ಹಿರೇಮಠ ವೃದ್ಧಾಶ್ರಮ, ದೇವರಾಜಅರಸ್ ಕಾಲೋನಿ, ಬಸವನ ಕುಡುಚಿ, ಬೆಳಗಾವಿ. |

**ಸರ್ಕಾರದ ಆದೇಶ ಸಂಖ್ಯೆ: ಮಮಇ 11 ಪಿಎಚ್‌ಪಿ 2012,**
**ಬೆಂಗಳೂರು, ದಿನಾಂಕ: 23.09.2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯ್ದೆ 2007(ಕೇಂದ್ರ ಶಾಸನ 2007ರ ನಿಯಮ-56)ನ್ನು ಸಮರ್ಪಕವಾಗಿ

..3

ಅನುಷ್ಠಾನಗೊಳಿಸಲು ರಚಿಸಲಾಗಿರುವ ಸರ್ಕಾರದ ಆದೇಶ ಸಂಖ್ಯೆ: ಮಮಇ/479/ಪಿಹೆಚ್‌ಪಿ/ 2007, ದಿನಾಂಕ:22-08-2011ನ್ನು ಕೆಳಗಿನಂತೆ ಭಾಗಶಃ ಮಾರ್ಪಡಿಸಿ ಹೊಸದಾಗಿ ರಾಜ್ಯ ಪರಿಷತ್ ಸಭೆಯನ್ನು ಈ ಕೆಳಕಂಡ ಸದಸ್ಯರನ್ನೊಳಗೊಂಡಂತೆ ಪುನರ್‌ರಚಿಸಲಾಗಿದೆ.

| ಕ್ರ. ಸಂ. | ಪದನಾಮ ಮತ್ತು ಇಲಾಖೆಯ ಹೆಸರು | ಪದನಾಮ |
|---|---|---|
| 1. | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು | ಅಧ್ಯಕ್ಷರು |
| 2. | ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ | ಸದಸ್ಯರು |
| 3. | ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ | ಸದಸ್ಯರು |
| 4. | ಸರ್ಕಾರದ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | ಸದಸ್ಯರು |
| 5. | ಸರ್ಕಾರದ ಕಾರ್ಯದರ್ಶಿ, ಕಂದಾಯ ಇಲಾಖೆ(ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ನಿರ್ದೇಶನಾಲಯ) | ಸದಸ್ಯರು |
| 6. | ಸರ್ಕಾರದ ಕಾರ್ಯದರ್ಶಿ, ಸಾರಿಗೆ ಇಲಾಖೆ | ಸದಸ್ಯರು |
| 7. | ಸರ್ಕಾರದ ಕಾರ್ಯದರ್ಶಿ, ಗೃಹ ಇಲಾಖೆ | ಸದಸ್ಯರು |
| 8. | ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ | ಸದಸ್ಯ ಕಾರ್ಯದರ್ಶಿ |
| 9. | **ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರೇತರ ಸ್ವಯಂ ಸೇವಾ ಸಂಸ್ಥೆಗಳು :** | |
| | 1. ಜೆ.ಎಸ್.ಎಸ್ ಮಹಾ ವಿದ್ಯಾಪೀಠ, ಜಗದ್ಗುರು ಶ್ರೀ ಶಿವರಾತ್ರಿ ರಾಜೇಂದ್ರ ವೃತ್ತ, ಲಕ್ಷ್ಮೀಪುರಂ,, ಮೈಸೂರು | ಸರ್ಕಾರೇತರ ಸದಸ್ಯರು |
| | 2. ಸಂಧ್ಯಾದೀಪ, ನಂ.50, 39 ನೇ ಅಡ್ಡರಸ್ತೆ, ಪೂರ್ಣಪ್ರಜ್ಞಾ ಬಡಾವಣೆ, ಬೆಂಗಳೂರು-61 | ಸರ್ಕಾರೇತರ ಸದಸ್ಯರು |
| | 3. ನೈಟಿಂಗೇಲ್ ಮೆಡಿಕಲ್ ಟ್ರಸ್ಟ್, ನಂ.337, 2ನೇ ಕ್ರಾಸ್, 1ನೇ ಬ್ಲಾಕ್, ಆರ್.ಟಿ.ನಗರ, ಬೆಂಗಳೂರು. | ಸರ್ಕಾರೇತರ ಸದಸ್ಯರು |
| | 4. ಹಿರಿಯ ನಾಗರಿಕರ ವೇದಿಕೆ, ಕೊಡಗು(ರಿ), ನಗರ ಪೌರ ಸಭೆಯ ಕಾಂಪ್ಲೆಕ್ಸ್ ಎದುರು, ಖಾಸಗಿ ಬಸ್ ನಿಲ್ದಾಣದ ಹತ್ತಿರ, ಮಡಿಕೇರಿ. | ಸರ್ಕಾರೇತರ ಸದಸ್ಯರು |
| 10. | **ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರೇತರ ಪ್ರತಿನಿಧಿಗಳು** | |
| | 1. ಶ್ರೀ ಲಕ್ಷ್ಮೀನಾರಾಯಣ, ನಿಸರ್ಗ ನಂದನಾ ಲೇಔಟ್, ಬನ್ನೇರುಘಟ್ಟ, ಆನೇಕಲ್ ರಸ್ತೆ, ಕೊಪ್ಪ ಗೇಟ್, ಬೆಂಗಳೂರು-83 | ಸರ್ಕಾರೇತರ ಸದಸ್ಯರು |
| | 2. ಡಾ. ನಾಗರತ್ನ ಜೋಶಿ, ಕೃಷ್ಣಾ ಸನ್ನಿದಿ, ಸಂಗನಕಲ್ಲು, ಮೋಕಾ ರಸ್ತೆ, ಬಳ್ಳಾರಿ | ಸರ್ಕಾರೇತರ ಸದಸ್ಯರು |
| | 3. ಶ್ರೀಮತಿ ಗುರಮ್ಮ ಸಿದ್ಧರೆಡ್ಡಿ, ಕಿತ್ತೂರು ರಾಣಿ ಚೆನ್ನಮ್ಮ ಮಹಿಳಾ ಮಂಡಳಿ, ಗುಲ್ಬರ್ಗ ಶಾಖೆ, ಸಾಗರ ಬಿಲ್ಡಿಂಗ್, ಚಿಲ್ಡ್ರನ್ ಪಾರ್ಕ್ ಹತ್ತಿರ, ಶಾಂತಿನಗರ ಗುಲ್ಬರ್ಗ. | ಸರ್ಕಾರೇತರ ಸದಸ್ಯರು |
| | 4. ಶ್ರೀ. ಎಂ.ಎಸ್. ಚೌಗಲ, ನಾಗನೂರು ಶಿವಬಸವೇಶ್ವರ ಟ್ರಸ್ಟ್, ಶ್ರೀಮತಿ ಚೆನ್ನಮ್ಮ ಹಿರೇಮಠ ವೃದ್ಧಾಶ್ರಮ, ದೇವರಾಜಅರಸ್ ಕಾಲೋನಿ, ಬಸವನ ಕುಡುಚಿ, ಬೆಳಗಾವಿ. | ಸರ್ಕಾರೇತರ ಸದಸ್ಯರು |

ಸರ್ಕಾರಿ ಆದೇಶ ಸಂಖ್ಯೆ:ಮಮಇ/479/ಪಿಹೆಚ್‌ಪಿ/2007, ದಿನಾಂಕ:22-08-2011ರ ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯ್ದೆ 2007(ಕೇಂದ್ರ ಶಾಸನ 2007ರ ನಿಯಮ-56)ನ್ನು

..4

ಸರ್ಮಪಕವಾಗಿ ಅನುಷ್ಠಾನಗೊಳಿಸಲು ಹೊರಡಿಸಿರುವ ಮಾರ್ಗಸೂಚಿಗಳಲ್ಲಿನ ಷರತ್ತುಗಳು/ ನಿಬಂಧನೆಗಳು ಅಸ್ತಿತ್ವದಲ್ಲಿರುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

[ಬಿ.ಕಮಲಮ್ಮ]
ಸರ್ಕಾರದ ಅಧೀನ ಕಾರ್ಯದರ್ಶಿ
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು(ಕ್ರ.ಸಂ. 4 ರಿಂದ 7ರವರೆಗಿನ ವಿಳಾಸಗಳಿಗೆ ನಿರ್ದೇಶಕರ ಮುಖಾಂತರ ಕಳುಹಿಸಲು ಕೋರಿದೆ.)
3. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಎಲ್ಲಾ ಜಿಲ್ಲಾಧಿಕಾರಿಗಳು
5. ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು.
6. ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ.
7. ನಾಮನಿರ್ದೇಶಿತ ಸಂಸ್ಥೆಗಳು ಮತ್ತು ಹಿರಿಯ ನಾಗರಿಕರಿಗೆ.
8. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

ಪ್ರತಿ:

1. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ ಆರ್ಥಿಕ ಇಲಾಖೆ ಇವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ ಕಂದಾಯ ಇಲಾಖೆ(ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ನಿರ್ದೇಶನಾಲಯ) ಇವರ ಆಪ್ತಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ ಸಾರಿಗೆ ಇಲಾಖೆ ಇವರ ಆಪ್ತಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ ಗೃಹ ಇಲಾಖೆ ಇವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.